ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ದಾವಾ ಆಸ್ತಿಯ ಇ-ಖಾತಾವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಒಂದು ಎನ್.ಸಿ.ಆರ್ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ನೀಡಿದ 3 ತಕರಾರು ಅರ್ಜಿಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-4 ರಿಂದ ನಿಪಿ-6 ಎಂದು, 4 ಫೋಟೋಗಳನ್ನು ಹಾಜರುಪಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-7 ಎಂದು, ಅದಕ್ಕೆ ಸಂಬಂಧಪಟ್ಟ ಸಿಡಿ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7(ಎ) ಎಂದು, 4 ಡಿಮ್ಯಾಂಡ್ ರಿಜಿಸ್ಟರ್ ಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-8 ರಿದಂ ನಿಪಿ-11 ಎಂದು ಗುರುತಿಸಲಾಯಿತು.

ಪ್ರತಿವಾದಿಗಳು ಏಕಪಕ್ಷೀಯವಾಗಿರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.